**Akashvani : Bangalore**
**National Bulletin In Kannada**
**18.03.2024 / 13.10 hrs**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**18.03.2024 / 13.10 hrs**

**<><*<><>*><>**

ಮುಖ್ಯಾಂಶಗಳು

೧. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಧ್ಯಾಹ್ನ ಕರ್ನಾಟಕದ ಶಿವಮೊಗ್ಗಕ್ಕೆ ಭೇಟಿ : ಸಾರ್ವಜನಿಕ ಸಭೆಯಲ್ಲಿ ಭಾಗಿ

೨. ಭಾರತದ ನವೋದ್ಯಮ ಪರಿಸರ ವ್ಯವಸ್ಥೆ ಪ್ರದರ್ಶಿಸುವ ಸ್ಟಾರ್ಟ್‌ಅಪ್ ಮಹಾಕುಂಭ ಇಂದಿನಿಂದ ಆರಂಭ ; ೨೦ರ ವರೆಗೆ ನಡೆಯಲಿರುವ ಸಮಾವೇಶ

೩. ಕರ್ನಾಟಕ ರಾಜಧಾನಿ ಬೆಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ನೇತೃತ್ವದಲ್ಲಿ ಸಭೆ

೪. ರಷ್ಯಾ ಅಧ್ಯಕ್ಷರಾಗಿ ವ್ಲಾದಿಮಿರ್ ಪುಟಿನ್ ಪುನರಾಯ್ಕೆ

೫. ಕ್ರಿಕೆಟ್: ಮಹಿಳಾ ಪ್ರೀಮಿಯರ್ ಲೀಗ್ ಟಿ-೨೦ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಚಾಂಪಿಯನ್ ಪಟ್ಟ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಅಭಿನಂದನೆಗಳ ಮಹಾಪೂರ

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಧ್ಯಾಹ್ನ ೨ ಗಂಟೆಗೆ ಕರ್ನಾಟಕದ ಶಿವಮೊಗ್ಗದಲ್ಲಿ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸಾರ್ವಜನಿಕ ಸಭೆಗೆ ಯುವಜನರು, ಮಹಿಳೆಯರು, ರೈತರು ಸೇರಿ ಸುಮಾರು ಎರಡೂವರೆ ಲಕ್ಷಕ್ಕೂ ಹೆಚ್ಚು ಜನರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದು ವಿಧಾನಪರಿಷತ್ ಮುಖ್ಯ ಸಚೇತಕ ಎನ್.ರವಿಕುಮಾರ್ ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ. ಪ್ರಧಾನಮಂತ್ರಿ ನರೇಂದ್ರ

ಮೋದಿ ಇಂದು ತೆಲಂಗಾಣಕ್ಕೂ ಭೇಟಿ ನೀಡಲಿದ್ದಾರೆ. ಜಗತಿಯಾಲ್‌ನಲ್ಲಿ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಭಾರತದ ನವೋದ್ಯಮ ಪರಿಸರ ವ್ಯವಸ್ಥೆ ಪ್ರದರ್ಶಿಸುವ ಸ್ಟಾರ್ಟ್‌ಅಪ್ ಮಹಾಕುಂಭ ಇಂದು ಆರಂಭವಾಗಲಿದೆ. ನವದೆಹಲಿಯ ಭಾರತ ಮಂಟಪಂನಲ್ಲಿ ಆಯೋಜಿಸಲಾಗಿರುವ ಈ ಮಹಾಕುಂಭ ಇದೇ ೨೦ರವರೆಗೆ ನಡೆಯಲಿದೆ. ಕೃತಕ ಬುದ್ಧಿಮತ್ತೆ, ಬಿ೨ಬಿ, ಕೃಷಿ ತಂತ್ರಜ್ಞಾನ, ಡೀಪ್‌ಟೆಕ್, ಹವಾಮಾನ ಟೆಕ್, ಇ-ಕ್ರೀಡೆ, ಫಿಂಟೆಕ್, ಗೇಮಿಂಗ್ ಮೊದಲಾದ ವಲಯಗಳನ್ನು ಕೇಂದ್ರೀಕರಿಸಿದ ನವೋದ್ಯಮ ಪರಿಸರ ವ್ಯವಸ್ಥೆಯನ್ನು ಅನಾವರಣಗೊಳಿಸಲಾಗುತ್ತಿದೆ. ಈ ಕ್ಷೇತ್ರಗಳಲ್ಲಿ ಬಂಡವಾಳ ಹೂಡಲು ಇಚ್ಛೆ ಪಡುವ ಉದ್ದಿಮೆದಾರರು, ಕಾರ್ಪೊರೇಟ್ ಸಹಭಾಗಿಗಳು ಹಾಗೂ ನವೋದ್ಯಮಿಗಳ ನಡುವೆ ಸಂಪರ್ಕ ಕಲ್ಪಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.  ಈ ಸಂದರ್ಭದಲ್ಲಿ ಮಾತನಾಡಿದ ಡಿಪಿಐಐಟಿ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್, ಭಾರತದಲ್ಲಿ ಪ್ರತಿದಿನ ನವೋದ್ಯಮಗಳು ಅಸ್ತಿತ್ವಕ್ಕೆ ಬರುತ್ತಿವೆ. ಇಂತಹ ಬೃಹತ್ ಪ್ರಮಾಣದಲ್ಲಿ ಕಾರ್ಯಕ್ರಮ ಏರ್ಪಡಿಸುತ್ತಿರುವುದು ಇದೇ ಮೊದಲ ಬಾರಿಯಾಗಿದೆ ಎಂದು ತಿಳಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಈ ಕಾರ್ಯಕ್ರಮದಲ್ಲಿ ಒಂದು ದಿನ ಭಾಗವಹಿಸುವ ನಿರೀಕ್ಷೆಯಿದೆ. ಈ ಕಾರ್ಯಕ್ರಮದಲ್ಲಿ ೧೦ ದೇಶಗಳ ಒಂದು ಸಾವಿರಕ್ಕೂ ಅಧಿಕ ನವೋದ್ಯಮಗಳು, ಸುಮಾರು ೩೦ ಸಾವಿರ ಭವಿಷ್ಯದ ಉದ್ದಿಮೆದಾರರು, ೩೦ ಸಾವಿರ ವ್ಯಾಪಾರಿ ಸಂದರ್ಶಕರು, ಸಾವಿರಾರು ಬಂಡವಾಳ ಹೂಡಿಕೆದಾರರು, ೫ ನೂರಕ್ಕೂ ಅಧಿಕ ಇನ್‌ಕ್ಯೂಬೇಟರ್ಸ್, ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

<><*<><>*><>

ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದ ನಂತರ ಸಬರಮತಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಹಳಿ ತಪ್ಪಿರುವ ಘಟನೆ ರಾಜಸ್ಥಾನದ ಅಜ್ಮೀರ್‌ನಲ್ಲಿ ನಡೆದಿದೆ. ಮಧ್ಯರಾತ್ರಿ ೧.೦೪ ರ ಸುಮಾರಿಗೆ ಮದರ್ ರೈಲುನಿಲ್ದಾಣದ ಬಳಿ ಈ ಘಟನೆ ಸಂಭವಿಸಿದ್ದು, ಸಬರಮತಿ-ಆಗ್ರಾ ಕ್ಯಾಂಟ್ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್, ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದಿದೆ. ಬಳಿಕ ಕನಿಷ್ಠ ನಾಲ್ಕು ಕೋಚ್‌ಗಳು ಹಳಿತಪ್ಪಿದ್ದು, ಘಟನೆಯಲ್ಲಿ ಕೆಲವರಿಗೆ ಸಣ್ಣಪುಟ್ಟ ಗಾಯಗಳಾಗಿರುವ ಬಗ್ಗೆ ವರದಿಯಾಗಿದೆ. ರೈಲಿನ ಲೋಕೋ ಪೈಲಟ್ ತುರ್ತು ಬ್ರೇಕ್ ಹಾಕಿದರೂ ಡಿಕ್ಕಿಯನ್ನು ತಪ್ಪಿಸಲು ಸಾಧ್ಯವಾಗಲಿಲ್ಲ ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ತಕ್ಷಣ

ಅಧಿಕಾರಿಗಳು ಅಪಘಾತ ಸ್ಥಳವನ್ನು ತಲುಪಿದ್ದು, ಹಳಿ ಮರುಸ್ಥಾಪನೆ ಕಾರ್ಯವನ್ನು ಮಾಡಲಾಗುತ್ತಿದೆ ಎಂದು ವಾಯುವ್ಯ ರೈಲ್ವೆಯ ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

<><*<><>*><>

ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಅಧ್ಯಕ್ಷೀಯ ಚುನಾವಣೆಯಲ್ಲಿ ಮತ್ತೆ ಗೆಲುವು ಸಾಧಿಸಿದ್ದಾರೆ. ಚುನಾವಣೆಯಲ್ಲಿ ಪುಟಿನ್ ಅವರು ಶೇಕಡ ೮೭.೧೭ ರಷ್ಟು ಮತಗಳನ್ನು ಪಡೆದಿದ್ದಾರೆ ಎಂದು ಒಕ್ಕೂಟದ ಕೇಂದ್ರ ಚುನಾವಣಾ ಆಯೋಗದ ದತ್ತಾಂಶ ಉಲ್ಲೇಖಿಸಿ ಟಾಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಕಮ್ಯೂನಿಸ್ಟ್ ಪಾರ್ಟಿ ಆಫ್ ರಷ್ಯನ್ ಫೆಡರೇಶನ್ ಅಭ್ಯರ್ಥಿ ನಿಕೊಲಾಯ್ ಖರಿಟೋನೊವ್ ಶೇಕಡ ೪.೧ ರಷ್ಟು ಮತಗಳೊಂದಿಗೆ ಎರಡನೇ ಸ್ಥಾನ ಪಡೆದಿದ್ದಾರೆ. ನ್ಯೂ ಫೀಪಲ್ ಪಾರ್ಟಿ ಅಭ್ಯರ್ಥಿ ವ್ಲಾಡಿಸ್ಲಾವ್ ದಾವಂಕೋವ್ ಶೇಕಡ ೪.೮ ರಷ್ಟು ಮತಗಳೊಂದಿಗೆ ಮೊರನೇ ಸ್ಥಾನದಲ್ಲಿದ್ದಾರೆ. ಲಿಬರಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ರಷ್ಯಾ ಅಭ್ಯರ್ಥಿ ಲಿಯೊನಿಡ್ ಸ್ಲಟ್ಸ್ಕಿ ಶೇಕಡ ೩.೧೫ ರಷ್ಟು ಮತಗಳನ್ನು ಪಡೆದಿದ್ದಾರೆ. ಭಾನುವಾರ ಸಂಜೆ ಮತದಾನ ಮುಕ್ತಾಯವಾಗಿದ್ದು, ಮಾರ್ಚ್ ೧೫ ರಿಂದ ೧೭ ವರೆಗೆ ಮೂರು ದಿನ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ಮತದಾನದ ಪ್ರಮಾಣವು ಶೇಕಡ ೭೪.೨೨ ರಷ್ಟಿದೆ. ೨೦೧೮ರಲ್ಲಿ ನಡೆದ ಚುನಾವಣೆಯಲ್ಲಿ ಶೇಕಡ ೬೭.೫೪ರಷ್ಟು ಮತದಾನವಾಗಿತ್ತು. ೨೦೧೮ ರ ಚುನಾವಣೆಗಳಿಗೆ ಹೋಲಿಸಿದರೆ ಪುಟಿನ್ ಹೆಚ್ಚಿನ ಮತಗಳನ್ನು ಪಡೆದಿದ್ದಾರೆ. ಗೆಲುವು ಸಾಧಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಪುಟಿನ್, ರಷ್ಯಾ ಮತ್ತು ಯುಎಸ್ ನೇತೃತ್ವದ ನ್ಯಾಟೋ ಒಕ್ಕೂಟದ ನಡುವಿನ ಯಾವುದೇ ನೇರ ಸಂಘರ್ಷವು ಪೂರ್ಣ ಪ್ರಮಾಣದ ಮೂರನೇ ವಿಶ್ವ ಯುದ್ಧದಿಂದ ಒಂದು ಹೆಜ್ಜೆ ದೂರ ಎಂಬ ಅರ್ಥ ಎಂದು ಪಾಶ್ಚಿಮಾತ್ಯ ಶಕ್ತಿಗಳಿಗೆ ಎಚ್ಚರಿಕೆ ನೀಡಿದರು. ಆದರೆ, ಈ ಬಗ್ಗೆ ಯಾರೊಬ್ಬರೂ ಆಸಕ್ತಿ ತೋರುವುದು ಅಸಂಭವ ಎಂದೂ ಅವರು ಹೇಳಿದ್ದಾರೆ. ಪುಟಿನ್ ರಷ್ಯಾದ ಅಧ್ಯಕ್ಷರಾಗಿ ನಾಲ್ಕು ಬಾರಿ ಸೇವೆ ಸಲ್ಲಿಸಿದ್ದಾರೆ. ಮೊದಲ ಬಾರಿಗೆ ೨೦೦೦ ರಲ್ಲಿ ಮತ್ತು ೨೦೦೪, ೨೦೧೨ ಮತ್ತು ೨೦೧೮ ರಲ್ಲಿ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರು.

<><*<><>*><>

ಮಹಿಳಾ ಪ್ರೀಮಿಯರ್ ಲೀಗ್ ೨೦೨೪ ಟಿ-೨೦ ಪಂದ್ಯಾವಳಿಯಲ್ಲಿ ಮೊದಲ ಬಾರಿಗೆ ಚಾಂಪಿಯನ್ ಪಟ್ಟ ಗೆದ್ದುಕೊಂಡಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಅಭಿನಂದನೆಗಳ ಮಹಾಪೂರ ಹರಿದುಬಂದಿದೆ. ಖ್ಯಾತ ಕ್ರಿಕೆಟಿಗರಾದ ಸಚಿನ್ ತೆಂಡೂಲ್ಕರ್, ವೀರೇಂದ್ರ ಸೆಹ್ವಾಗ್, ಕ್ರಿಸ್ ಗೇಯ್ಲ್, ಮಯಾಂಕ್ ಅಗರ್‌ವಾಲ್, ವಿಜಯಮಲ್ಯ, ಮಿಥಾಲಿ ರಾಜ್, ದಿನೇಶ್ ಕಾರ್ತಿಕ್,

ಸೇರಿದಂತೆ ಹಲವಾರು ಮಂದಿ ಆರ್‌ಸಿಬಿ ತಂಡಕ್ಕೆ ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ. ಕಳೆದ ರಾತ್ರಿ ನಡೆದ ಫೈನಲ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ೮ ವಿಕೆಟ್ ಗಳಿಂದ ಸೋಲಿಸುವ ಮೂಲಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮೊದಲ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿತು. ಡೆಲ್ಲಿ ಕ್ಯಾಪಿಟಲ್ಸ್ ತಂಡ ಒಡ್ಡಿದ ೧೧೪ ರನ್‌ಗಳ ಗುರಿ ಬೆನ್ನತ್ತಿದ ಆರ್‌ಸಿಬಿ ತಂಡ ೧೯.೩ ಓವರುಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೧೫ ರನ್ ಗಳಿಸಿ ಗೆಲುವಿನ ದಡ ಸೇರಿ ಪ್ರಶಸ್ತಿ ಮುಡಿಗೇರಿಸಿಕೊಂಡಿತು. ಆರ್‌ಸಿಬಿ ಪರ ಸ್ಮೃತಿ ಮಂದಾನ ೩೧ ಮತ್ತು ಸೋಫಿ ಡಿವೈನ್ ೩೨ ರನ್ ಗಳಿಸಿದರು. ಎಲ್ಲಿಸ್ ಪೇರಿ ೩೫ ಮತ್ತು ರಿಚ್ಚ ಘೋಷ್ ೧೭ ರನ್ ಬಾರಿಸಿ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು. ಇದಕ್ಕೂ ಮೊದಲು ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ತಂಡ ೧೮.೩ ಓವರುಗಳಲ್ಲಿ ೧೧೩ ರನ್ ಗಳಿಸಿ ತನ್ನೆಲ್ಲ ವಿಕೆಟ್ ಕಳೆದುಕೊಂಡಿತು. ಡೆಲ್ಲಿ ಪರ ಶಫಾಲಿ ವರ್ಮಾ ೪೪ ರನ್, ಮೆಗ್ ಲ್ಯಾನಿಂಗ್ ೨೩ ರನ್, ರಾಧಾ ಯಾದವ್ ೧೨, ಅನುರಾಧ ರೆಡ್ಡಿ ೧೦ ರನ್ ಗಳಿಸಿದರು. ಆರ್‌ಸಿಬಿ ತಂಡದ ಪರ ಶ್ರೇಯಾಂಕ ಪಟೇಲ್ ನಾಲ್ಕು ವಿಕೆಟ್, ಮೊಲಿನೆಕ್ಸ್ ಮೂರು ವಿಕೆಟ್ ಹಾಗೂ ಆಶಾ ಶೋಭನ ೨ ವಿಕೆಟ್ ಪಡೆದರು. ಎದುರಾಳಿ ತಂಡ ಹೆಚ್ಚು ಮೊತ್ತ ಗಳಿಸದಂತೆ ರಾಯಲ್ ಚಾಲೆಂಜರ್ಸ್ ತಂಡದ ಬೌಲರ್‌ಗಳು ಕಟ್ಟಿಹಾಕಿದ್ದು ತಂಡಕ್ಕೆ ವಿಶ್ವಾಸ ನೀಡಿತು. ಇದೇ ವಿಶ್ವಾಸದಲ್ಲಿ ಗೆಲುವಿನ ಗುರಿ ಬೆನ್ನತ್ತಿದ ಆರ್‌ಸಿಬಿ ತಂಡ ಮೂರು ಎಸೆತಗಳು ಬಾಕಿ ಇರುವಂತೆ ೧೧೫ ರನ್ ಪೇರಿಸಿ ಗೆಲುವಿನ ನಗೆ ಬೀರಿತು.

<><*<><>*><>

ಭಾರತ-ಸೆಶೆಲ್ಸ್ ನಡುವಿನ ಜಂಟಿ ಸೇನಾ ಸಮರಾಭ್ಯಾಸ-ಲಮಿತಿಯೆ-೨೦೨೪ ಕಾರ್ಯಕ್ರಮ ಇಂದು ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ಭಾರತದ ಸೇನಾಪಡೆಯ ತುಕಡಿಯೊಂದು ಸೆಶೆಲ್ಸ್‌ಗೆ ಪ್ರಯಾಣ ಬೆಳೆಸಿದೆ.  ಕ್ರಿಯೋಲೆ ಭಾಷೆಯಲ್ಲಿ ಲಮಿತಿಯೆ ಎಂದರೆ ಸ್ನೇಹ ಎಂದು ಅರ್ಥ. ಭಾರತ ಮತ್ತು ಸೆಶೆಲ್ಸ್‌ಗಳು ೨೦೦೧ ರಿಂದ ಪ್ರತಿ ೨ ವರ್ಷಗಳಿಗೊಮ್ಮೆ ಈ ರೀತಿಯ ತರಬೇತಿ ಕಾರ್ಯಕ್ರಮ ನಡೆಸುತ್ತಿದ್ದು, ಇಂತಹ ಹತ್ತನೇಯ ಸೇನಾ ಕವಾಯತು ಇದಾಗಿದೆ. ಭಾರತೀಯ ಸೇನೆಯ ಗೂರ್ಖಾ ರೈಫಲ್ಸ್‌ನ ೪೫ ಸಿಬ್ಬಂದಿ ಹಾಗೂ ಸೆಶೆಲ್ಸ್‌ನ ರಕ್ಷಣಾಪಡೆಯ ಸಿಬ್ಬಂದಿ ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಕಾರ್ಯಕ್ರಮ ಈ ತಿಂಗಳ ೨೭ರವರೆಗೆ ನಡೆಯಲಿದೆ. ಈ ಸಮರಾಭ್ಯಾಸ ಉಭಯ ದೇಶಗಳ ನಡುವೆ ದ್ವಿಪಕ್ಷೀಯ ಸೈನಿಕ ಸಂಬಂಧ, ಕೌಶಲ್ಯಗಳ ವಿನಿಮಯಕ್ಕೆ ಒದಗಿರುವ ಅವಕಾಶವೆಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><*<><>*><>

ಅಂತಾರಾಷ್ಟ್ರೀಯ ಜಲ ಗಡಿ ಉಲ್ಲಂಘನೆ ಆರೋಪದ ಮೇಲೆ ರಾಮೇಶ್ವರಂ ಮೂಲದ ೧೮ ಮೀನುಗಾರರನ್ನು ಶ್ರೀಲಂಕಾ ನೌಕಾಪಡೆ ವಶಕ್ಕೆ ಪಡೆದಿದೆ. ಹೆಚ್ಚಿನ ವಿಚಾರಣೆಗೆ ಅವರನ್ನು ಕಂಕಸಂತುರೈ ಬಂದರಿಗೆ ಕರೆದೊಯ್ಯಲಾಗಿದೆ. ಕೇಂದ್ರ ಸರ್ಕಾರ ಈ ಬಗ್ಗೆ ಕ್ರಮ ಕೈಗೊಳ್ಳಲು ವಿಫಲವಾಗಿರುವುದರಿಂದ ತಾವು ಅಸಹಾಯಕರಾಗಿದ್ದೇವೆ ಎಂದು ರಾಮೇಶ್ವರಂನಲ್ಲಿರುವ ಮೀನುಗಾರರ ಸಂಘ ಹೇಳಿದೆ. ರಾಮೇಶ್ವರಂ ಮೀನುಗಾರಿಕಾ ಬಂದರಿನಿಂದ ಸಮುದ್ರಕ್ಕೆ ತೆರಳಿದ್ದ ೪೭೦ ಯಾಂತ್ರೀಕೃತ ದೋಣಿಗಳ ಪೈಕಿ, ಶ್ರೀಲಂಕಾ ನೌಕಾಪಡೆಯು ಐಎಂಬಿಎಲ್‌ಗೆ ಸಮೀಪದಲ್ಲಿದ್ದ ಭಾರತೀಯ ದೋಣಿಗಳನ್ನು ಹಿಂದೆ ತೆರಳಲು ಸೂಚಿಸಿತು. ಎರಡು ದೋಣಿಗಳು ಲಂಕಾದ ನೀರಿನಲ್ಲಿ ಉಳಿದುಕೊಂಡಿದ್ದು, ಅದರ ೧೮ ಸಿಬ್ಬಂದಿಯನ್ನು ಲಂಕಾ ನೌಕಾಪಡೆ ವಶಕ್ಕೆ ಪಡೆದುಕೊಂಡಿದೆ ಎಂದು ಹೇಳಲಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೩೦ ಕ್ಕೆ <>*><>